ಸಂಖ್ಯೆ: ಆಡಳಿತ/ನೇಮಕಾತಿ/5227/ 2018
ಅಡಕ: ನೇಮಕಾತಿ ಅಧಿಸೂಚನೆ

ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ,
ಮೈಸೂರು, ದಿನಾಂಕ 15.03.2018.
ದೂರವಾಣಿ : 0821 – 2330452
0821 – 2332477

ಗೆ

recruitment@karnataka.gov.in

ಮಾನ್ಯರೇ,

ವಿಷಯ: ದಿನಾಂಕ 15.03.2018 ರ ಈ ಕಛೇರಿಯ ನೇಮಕಾತಿ ಅಧಿಸೂಚನೆ ಸಂಖ್ಯೆ: ಆಡಳಿತ/ನೇಮಕಾತಿ/5215/2018ನ್ನು ಕಳುಹಿಸುತ್ತಿರುವ ಕುರಿತು.

ಉಲ್ಲೇಖ: ದಿನಾಂಕ 03.07.2017 ನೇ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ) ರವರ ಸುತ್ತೋಲೆ ಸಂಖ್ಯೆ ಸಿಆಸುಇ 36 EGM 2017.

◇ * ◇ * ◇

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ 15.03.2018ರ ಈ ಕಛೇರಿಯ ನೇಮಕಾತಿ ಅಧಿಸೂಚನೆ ಸಂಖ್ಯೆ: ಆಡಳಿತ/ನೇಮಕಾತಿ/5215/2018ರ ಅನ್ವಯ ಮೈಸೂರು ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ ಶೀಘ್ರಲಿಪಿಗಾರರ 07 ಹುದ್ದೆಗಳ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಉಲ್ಲೇಖಿತ ಸುತ್ತೋಲೆಯ ನಿರ್ದೇಶನದಂತೆ ಈ ಪತ್ರದೊಂದಿಗೆ ಸದರಿ ನೇಮಕಾತಿ ಅಧಿಸೂಚನೆಯನ್ನು ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ. ಸುತ್ತೋಲೆಯಲ್ಲಿ ತಿಳಿಸಿರುವಂತೆ ನಿಗದಿತ ನಮೂನೆಯಲ್ಲಿ ಮಾಹಿತಿಯನ್ನು ಮಿಂಚಂಚೆ ಮುಖಾಂತರ ಕಳುಹಿಸಲಾಗಿದೆ.

| ಕ್ರ.ಸಂಖ್ಯೆ | ಹುದ್ದೆಗಳ ಪದನಾಮ/ಸಂಕ್ಷಿಪ್ತ ವಿವರ | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ |
|---|---|---|
| 1. | ಶೀಘ್ರಲಿಪಿಗಾರರು 07 ಹುದ್ದೆಗಳು ವಿವರ: ಆನ್‌ಲೈನ್ ಮುಖಾಂತರ ಅರ್ಜಿಗಳನ್ನು http://ecourts/gov.in/mysuru/online-recruitment ರಲ್ಲಿ ನೀಡಲಾದ ಲಿಂಕ್ ಮೂಲಕ ದಿನಾಂಕ 02.04.2018 ರಿಂದ ಸಲ್ಲಿಸಬೇಕು. ಸಂಪೂರ್ಣ ಮಾಹಿತಿಯನ್ನು ಮೈಸೂರು ನ್ಯಾಯಾಂಗ ಘಟಕದ ವೆಬ್‌ಸೈಟ್‌ನಲ್ಲಿ ಪರಿಶೀಲಿಸಬಹುದಾಗಿರುತ್ತದೆ. | 02.05.2018 |

www.kpscvaani.com

ಸುತ್ತೋಲೆಯಲ್ಲಿನ ನಿರ್ದೇಶನದಂತೆ ಸದರಿ ಮಾಹಿತಿಯನ್ನು ನಿಗದಿತ ಜಾಲತಾಣದಲ್ಲಿ ಪ್ರಕಟಿಸಲು ಕೋರಲಾಗಿದೆ.

ತಮ್ಮ ವಿಶ್ವಾಸಿ,

(ಎಸ್.ಕೆ.ವಂಟಿಗೋಡಿ)
ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಮೈಸೂರು.

District and Sessions Judge
MYSORE

www.kpscvaani.com

# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು

**ನೇಮಕಾತಿ ಅಧಿಸೂಚನೆ ಸಂಖ್ಯೆ:5215/2018 ದಿನಾಂಕ: 15.03.2018**

ವಿಷಯ:- ಮೈಸೂರು ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ 07 ಶೀಘ್ರಲಿಪಿಗಾರರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

****

ಮೇಲ್ಕಂಡ ಅಧಿಸೂಚನೆಯನ್ವಯ ಮೈಸೂರು ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ 07 ಶೀಘ್ರಲಿಪಿಗಾರರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಮೈಸೂರು ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ http://ecourts/gov.in/mysuru/online-recruitment ರಲ್ಲಿ ನೀಡಲಾದ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ದಿನಾಂಕ 02.04.2018 ರಿಂದ ದಿನಾಂಕ: 02.05.2018 ರ ರಾತ್ರಿ 11.59ರವರೆಗೆ ಮಾತ್ರ ಸಲ್ಲಿಸತಕ್ಕದ್ದು ಮತ್ತು ಭಾರತೀಯ ಸ್ಟೇಟ್ ಬ್ಯಾಂಕ್ ಚಲನ್ ಮುಖಾಂತರ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ: 05.05.2018 ಆಗಿರುತ್ತದೆ.

ಶೀಘ್ರಲಿಪಿಗಾರರು (Stenographer): 07 ಹುದ್ದೆಗಳು

ವೇತನ ಶ್ರೇಣಿ: ರೂ. 14550-350-15600-400-17200-450-19000-500-21000-600-24600-700-26700 ಹಾಗೂ ಇತರೆ ಭತ್ಯೆಗಳು. ( 6 ನೇ ವೇತನ ಆಯೋಗದ ವೇತನ ಶ್ರೇಣಿಗಳು ಅನ್ವಯಿಸುತ್ತವೆ.)

www.kpscvaani.com

**ಹುದ್ದೆಗಳ ವರ್ಗೀಕರಣ:**

ಹಿಂಬಾಕಿ 04 ಹುದ್ದೆಗಳು

| ಪ್ರವರ್ಗ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ | ಒಟ್ಟು |
|---|---|---|---|---|
| ಪರಿಶಿಷ್ಟ ಜಾತಿ | - | 01 | - | 01 |
| ಪರಿಶಿಷ್ಟ ಪಂಗಡ | 01 | 01 | - | 02 |
| ಪ್ರವರ್ಗ-1 | - | - | 1* | 01 |
| ಒಟ್ಟು | 1 | 2 | 1 | 04 |

* ದೃಷ್ಟಿ ಮಾಂದ್ಯ, ದೃಷ್ಟಿ ದೋಷವುಳ್ಳ ಅಭ್ಯರ್ಥಿ (Blind/Low Vision)

ಹೊಸ 03 ಹುದ್ದೆಗಳು

| ಪ್ರವರ್ಗ | ಇತರೆ | ಮಹಿಳೆ | ಅಂಗವಿಕಲ | ಒಟ್ಟು |
|---|---|---|---|---|
| ಸಾಮಾನ್ಯ | 01 | 01 | - | 02 |
| ಪ್ರವರ್ಗ-3ಬಿ | - | - | 1* | 01 |
| ಒಟ್ಟು | 01 | 01 | 01 | 03 |

* ದೃಷ್ಟಿ ಮಾಂದ್ಯ, ದೃಷ್ಟಿ ದೋಷವುಳ್ಳ ಅಭ್ಯರ್ಥಿ (Blind/Low Vision)

**ಶೈಕ್ಷಣಿಕ ವಿದ್ಯಾರ್ಹತೆ:**

i) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.

ii) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸುವ ಕನ್ನಡ ಮತ್ತು ಆಂಗ್ಲ ಹಿರಿಯ ಶ್ರೇಣಿ ಬೆರಳಚ್ಚು (Typewriting Senior) ಮತ್ತು ಶೀಘ್ರಲಿಪಿ

www.kpscvaani.com

(Shorthand Senior) ಪರೀಕ್ಷೆ ಅಥವಾ ತತ್ಸಮಾನ ಪರೀಕ್ಷೆಗಳಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

iii) ಕಛೇರಿ ಕಾರ್ಯ ಕಲಾಪಗಳಿಗೆ ಸಂಬಂಧಿಸಿದಂತೆ ಕಂಪ್ಯೂಟರ್ ಬಳಕೆಯ ಜ್ಞಾನ ಅವಶ್ಯಕವಾಗಿರುತ್ತದೆ.

ಆಯ್ಕೆಯ ವಿಧಾನ:

೧. ಅಭ್ಯರ್ಥಿಗಳ ಆಯ್ಕೆಯನ್ನು ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು 2007ರ ಅನ್ವಯ ನೇರ ನೇಮಕಾತಿಯ ಮೂಲಕ ನಡೆಸಲಾಗುವುದು.

೨. ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ನಿಮಿಷ ಒಂದಕ್ಕೆ 120 ಪದಗಳ ದರದಲ್ಲಿ 05 ನಿಮಿಷಗಳ ಉಕ್ತಲೇಖನವನ್ನು ತೆಗೆದುಕೊಂಡು, ಉಕ್ತಲೇಖನವನ್ನು 45 ನಿಮಿಷಗಳಲ್ಲಿ ಬೆರಳಚ್ಚುಯಂತ್ರ/ಕಂಪ್ಯೂಟರ್‌ನಲ್ಲಿ ಅನುಲಿಪಿ ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

೩. ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು, ಅದರಲ್ಲಿ ತೇರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನವು 05 ಅಂಕಗಳನ್ನೊಳಗೊಂಡಿರುತ್ತದೆ.

೪. ಯಾವುದೇ ವರ್ಗಗಳ ಮಹಿಳಾ ಅಭ್ಯರ್ಥಿ, ಗ್ರಾಮೀಣ ಮೀಸಲಾತಿ ಇರುವ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಾಗದಿದ್ದ ಪಕ್ಷದಲ್ಲಿ ಆ ಸ್ಥಾನಗಳಿಗೆ ಅದೇ ವರ್ಗಗಳ ಅರ್ಹ ಇತರ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

೫. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳಿಗೆ ಆಯಾ ಪ್ರವರ್ಗಗಳ ಅರ್ಹ ಅಭ್ಯರ್ಥಿಗಳ ಲಭ್ಯತೆಯ ಕೊರತೆಯಿಂದಾಗಿ ಭರ್ತಿ ಮಾಡಲಾಗದ ರಿಕ್ತ ಸ್ಥಾನಗಳನ್ನು ಬ್ಯಾಕ್‌ಲಾಗ್ ಎಂದು ಪರಿಗಣಿಸಿ ಮುಂದಕ್ಕೆ ಕೊಂಡೊಯ್ಯಲಾಗುವುದು.

www.kpscvaani.com

೬. ಹಿಂಬಾಕಿ ಹುದ್ದೆಗಳಲ್ಲಿ ಇರುವ ದೃಷ್ಟಿಮಾಂದ್ಯ / ದೃಷ್ಟಿದೋಷವುಳ್ಳ (Blind & Low Vision) ಅಭ್ಯರ್ಥಿಗಳು ಲಭ್ಯವಿಲ್ಲದೇ ಇದ್ದಲ್ಲಿ, ಆ ಹುದ್ದೆಗಳನ್ನು ಆಯಾ ವರ್ಗದ, ಗುರುತಿಸಲಾದ ಇತರೇ ಅಂಗವಿಕಲ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಯಾವುದೇ ಅರ್ಹ ಅಂಗವಿಕಲ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಅದೇ ವರ್ಗದ ಇತರೆ ಅಭ್ಯರ್ಥಿಗಳಿಂದ ಭರ್ತಿಮಾಡಲಾಗುವುದು.

೭. ಹೊಸ ಮೂರು ಹುದ್ದೆಗಳಲ್ಲಿ ಅಧಿಸೂಚಿಸಲಾಗಿರುವ ಪ್ರವರ್ಗ-3ಬಿ ಅಂಗವಿಕಲ (ದೃಷ್ಟಿಮಾಂದ್ಯ, ದೃಷ್ಟಿದೋಷವುಳ್ಳ ಅಭ್ಯರ್ಥಿ (Blind/Low Vision)) ಅಂಗವಿಕಲತೆ ಹೊಂದಿರುವ ಅರ್ಹ ಅಭ್ಯರ್ಥಿ ಲಭ್ಯವಿಲ್ಲದೇ ಇದ್ದಲ್ಲಿ ಸದರಿ ಸ್ಥಾನವನ್ನು ಮುಂದಿನ ನೇಮಕಾತಿಗೆ ಕೊಂಡೊಯ್ಯಲಾಗುವುದು.

<u>ವಿಶೇಷ ಟಿಪ್ಪಣಿ</u>: ಆಯ್ಕೆಯಾದ ಅಭ್ಯರ್ಥಿಗಳು (NPS) ನೂತನ ಪಿಂಚಣಿ ಯೋಜನೆಗೆ ಒಳಪಡುತ್ತಾರೆ.

<u>ವಯೋಮಿತಿ:-</u>

ಅ. ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: **02.05.2018** ರಂದು ಅಭ್ಯರ್ಥಿಯು ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

ಆ. ಗರಿಷ್ಠ ವಯೋಮಿತಿ:

ಸಾಮಾನ್ಯ ಅಭ್ಯರ್ಥಿಗಳಿಗೆ ..................... : 35 ವರ್ಷಗಳು

2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ.......... : 38 ವರ್ಷಗಳು

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ-1 ರ ಅಭ್ಯರ್ಥಿಗಳಿಗೆ : 40 ವರ್ಷಗಳು

ಇ. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕ 02.05.2018 ರಂದು ಗರಿಷ್ಠ ವಯಸ್ಸನ್ನು ಮೀರಿರಕೂಡದು.

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಆಯಾ ಅಭ್ಯರ್ಥಿಗಳಿಗೆ ನಮೂದಿಸಿರುವ ಮಟ್ಟಿಗೆ ಹೆಚ್ಚಿಸಲಾಗುವುದು.

www.kpscvaani.com

1) ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.

2) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ, ಅವನು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

3) ಅಭ್ಯರ್ಥಿಯು ಅಂಗವಿಕಲನಾಗಿದ್ದಲ್ಲಿ, ವಿಧವೆಯಾಗಿದ್ದಲ್ಲಿ ಮತ್ತು ಜೀತ ಕಾರ್ಮಿಕನಾಗಿದ್ದಲ್ಲಿ 10 ವರ್ಷಗಳು.

4) ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೊ ಅಥವಾ ಹಿಂದೆ ಸೇವೆ ಸಲ್ಲಿಸಿದ್ದರೊ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

5) ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್‌ನಲ್ಲಿ ಪೂರ್ಣ ಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

6) ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತ ಗ್ರಾಮೀಣ ವಿದ್ಯುದೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

www.kpscvaani.com

7) ಮಾಜಿ ಸೈನಿಕರಿಗೆ, ವಿಧವೆಯರಿಗೆ ಮತ್ತು ಅಂಗವಿಕಲರಿಗೆ, ಜೀತಕಾರ್ಮಿಕರು ಹಾಗೂ ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದೊಳಗಾಗಿ ಪಡೆದಿಟ್ಟುಕೊಂಡಿರತಕ್ಕದ್ದು.

**ಅರ್ಜಿ ಸಲ್ಲಿಸುವ ವಿಧಾನ:**

**ನಿಗದಿತ ಅರ್ಜಿ ಶುಲ್ಕ, ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನ:**

| | |
|---|---|
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿ | ಯಾವುದೇ ಶುಲ್ಕವಿಲ್ಲ |
| ಪ್ರವರ್ಗ-2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ | ರೂ. 100/- |
| ಸಾಮಾನ್ಯ ವರ್ಗ | ರೂ. 200/- |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ http://ecourts.gov.in/mysuru/online-recruitment ರಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ State Bank Collect ಮೂಲಕ online payment through net banking/credit card/debit card/Challan download ಸೌಲಭ್ಯದ ಮೂಲಕ ಪಾವತಿ ಮಾಡಬಹುದಾಗಿದೆ.

ಈ ರೀತಿ net banking/credit card/debit card/Challan download ಸೌಲಭ್ಯದ ಮೂಲಕ ಶುಲ್ಕ ಪಾವತಿ ಮಾಡಲು ಇಚ್ಛಿಸದ ಅಭ್ಯರ್ಥಿಗಳು ಚಲನ್ ಪ್ರತಿಯನ್ನು ಅಧಿಕೃತ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ಅದರ printout ಅನ್ನು ಪಡೆದುಕೊಂಡು ಎಸ್.ಬಿ.ಐ. ನ ಯಾವುದೇ ಶಾಖೆಗೆ ಹಾಜರುಪಡಿಸಿ ಶುಲ್ಕವನ್ನು ಪಾವತಿಸತಕ್ಕದ್ದು.

ಇದನ್ನು ಹೊರತುಪಡಿಸಿ ಯಾವುದೇ ನಗದು, ಡಿಮ್ಯಾಂಡ್ ಡ್ರಾಫ್ಟ್ : ಪೋಸ್ಟಲ್ ಆರ್ಡರ್: ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಒಮ್ಮೆ ಪಾವತಿಸಿದ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ.

www.kpscvaani.com

## ಪರಿವೀಕ್ಷಣಾ ಅವಧಿ:

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ 02 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಅವರುಗಳ ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ, ಕನ್ನಡ ಭಾಷಾ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು.

ಕರ್ನಾಟಕ ಸರ್ಕಾರದ ನಿಯಮಾನುಸಾರ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

## ಅಭ್ಯರ್ಥಿಗಳು ON-LINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು:

೧. ಅಭ್ಯರ್ಥಿಗಳು ಅರ್ಜಿಯನ್ನು ON-LINE ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

೨. ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ SMS ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.

೩. ಅರ್ಹ ಅಭ್ಯರ್ಥಿಗಳಿಗೆ SMS/E-Mail ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ/ ಅರ್ಹತಾ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಸದರಿ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳನ್ನು

www.kpscvaani.com

ಸಂದರ್ಶನಕ್ಕೆ/ಅರ್ಹತಾ ಪರೀಕ್ಷೆಗೆ ಕರೆಯಲಾಗುವುದು. ಸಂದರ್ಶನ / ಅರ್ಹತಾ ಪರೀಕ್ಷೆಯ ಪ್ರವೇಶ ಪತ್ರಗಳನ್ನು ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ತಮ್ಮೊಂದಿಗೆ ತರಬೇಕು.

೪. ಅಭ್ಯರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

ಅ. ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು ಅಳತೆಯಲ್ಲಿ 5 cm ಉದ್ದ x 3.6 cm ಅಗಲವುಳ್ಳದ್ದಾಗಿರಬೇಕು ಮತ್ತು 50 kb ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.

ಆ. ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು).

ಇ. ಅಭ್ಯರ್ಥಿಯ ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5 c.m ಉದ್ದ x 7.5 c.m. ಅಗಲವುಳ್ಳದ್ದಾಗಿರಬೇಕು ಮತ್ತು 25 kb ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು.) ಅಪ್‌ಲೋಡ್ ಮಾಡಬೇಕು.

೫. ತದನಂತರ ಅಭ್ಯರ್ಥಿಯು ON-LINE ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನೂ ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಈ ಅಧಿಸೂಚನೆಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು download ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ / ಸಂದರ್ಶನದ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

೬. ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೋಂದಾಯಿಸಲು/ಸಲ್ಲಿಸಲು ದಿನಾಂಕ: **02.05.2018** ರ ರಾತ್ರಿ 11.59 ರವರೆಗೆ ಅವಕಾಶವಿರುತ್ತದೆ.

www.kpscvaani.com

೭. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

೮. ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

<u>ಇತರೆ ಸೂಚನೆಗಳು</u> :-

೧. ಮಾಜಿ ಸೈನಿಕ ವರ್ಗದ ಅಡಿಯಲ್ಲಿ ಮೀಸಲಾತಿ/ವಯೋಮಿತಿ ರಿಯಾಯಿತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆ ಹೊಂದಿದ ಅಥವಾ ವಿಮುಕ್ತಿ ಹೊಂದಿದ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.

೨. ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನೀಡಲಾದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಅರ್ಜಿ ಸ್ವೀಕರಿಸುವ ಕಡೆಯ ದಿನಾಂಕದೊಳಗೆ ಕಡ್ಡಾಯವಾಗಿ ಪಡೆದು ಇಟ್ಟುಕೊಂಡಿರತಕ್ಕದ್ದು.

೩. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ ಪ್ರವರ್ಗ-1 ರ ಅಭ್ಯರ್ಥಿಗಳು ನಮೂನೆ 'ಇ' ಯಲ್ಲಿ ಮತ್ತು ಪ್ರವರ್ಗ 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ 'ಎಫ್' ರಲ್ಲಿ ಸಂಬಂಧಿಸಿದ ತಹಸೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಅರ್ಜಿ ಸ್ವೀಕರಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು.

ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ/96/ಸೇನನಿ/2005, ದಿ:10.08.2005 ರ ಪ್ರಕಾರ ನಿಗದಿತ ನಮೂನೆ-2 ರಲ್ಲಿ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ ಇಟ್ಟುಕೊಳ್ಳತಕ್ಕದ್ದು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

www.kpscvaani.com

೪. ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣ ಪತ್ರ ನಮೂನೆ-2 ರ ಜೊತೆ ನಮೂನೆ-1 ರಲ್ಲೂ ದೃಢೀಕರಣ ಪತ್ರವನ್ನು ಪಡೆದುಕೊಂಡಿರತಕ್ಕದ್ದು.

೫. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿಃ 19.11.2005 ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ ಸಿಆಸುಇ/115/ಸೇನನಿ/2005 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

೬. ವಿಧವೆಯರು, ಜೀತ ಕಾರ್ಮಿಕರು ಹಾಗೂ ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

೭. ಎಲ್ಲಾ ಅರ್ಹ ಅಭ್ಯರ್ಥಿಗಳಿಗೂ ಅರ್ಹತಾ ಸ್ಪರ್ಧಾತ್ಮಕ/ಕೌಶಲ್ಯ ಪರೀಕ್ಷೆ ನಡೆಸಲಾಗುವುದು.

೮. ಅರ್ಹತಾ ಪರೀಕ್ಷೆ / ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಹಾಜರಾಗಬೇಕು.

೯. ಆಯ್ಕೆಯ ಸಂಬಂಧವಾಗಿ ಸಂದರ್ಶನಕ್ಕೆ ಅನರ್ಹರಾದ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸಲು ಅಸ್ಪದವಿರುವುದಿಲ್ಲ.

೧೦. ಅರ್ಹತಾ ಪರೀಕ್ಷೆಯ/ಸಂದರ್ಶನದ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು, ಶೈಕ್ಷಣಿಕ ವಿದ್ಯಾರ್ಹತೆ, (ಜನ್ಮ ದಿನಾಂಕವನ್ನು ತೋರಿಸಲು ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣಪತ್ರ/ವರ್ಗಾವಣೆ ಪ್ರಮಾಣ ಪತ್ರ), ಜಾತಿ ಪ್ರಮಾಣ ಪತ್ರ, ಗ್ರಾಮೀಣ ಅಭ್ಯರ್ಥಿ/ಮಾಜಿ ಸೈನಿಕರು/ಅಂ.ಅ ಮೀಸಲಾತಿಗೆ ಸಂಬಂಧಿಸಿದಂತೆ ಕ್ಲೇಮು ಮಾಡಿದ ಅಭ್ಯರ್ಥಿಗಳು ಇವುಗಳಿಗೆ ಸಂಬಂಧಿಸಿದಂತೆ ಅಗತ್ಯ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು.

www.kpscvaani.com

11. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದ ನಂತರ ಪಡೆದ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

12. ಪರಿಶೀಲನೆ ಮಾಡುವಾಗ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡು ಬಂದಲ್ಲಿ ಅವರ ಅಭ್ಯರ್ಥಿತನವನ್ನು ರದ್ದುಗೊಳಿಸಲಾಗುವುದು ಹಾಗೂ ಅವರು ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಕ್ರಿಮಿನಲ್ ಪ್ರಾಸಿಕ್ಯೂಷನ್‌ಗೂ ಸಹಾ ಗುರಿಯಾಗಬೇಕಾಗಿರುತ್ತದೆ. ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳ ಮೇಲೆ ಯಾವುದೇ ಸಮಯದಲ್ಲಾದರೂ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

13. ಅಭ್ಯರ್ಥಿಯು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸಿರುವುದು ಕಂಡು ಬಂದಲ್ಲಿ ಅಂತಹವರನ್ನು ನೇಮಕಾತಿಯಿಂದ ಅನರ್ಹಗೊಳಿಸಲಾಗುವುದು.

15/1/18

(ಎಸ್.ಕೆ.ವಂಟಿಗೋಡಿ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಮೈಸೂರು.
Prl District & Sessions Judge
MYSURU

ಅಧಿಸೂಚನೆಯ ನಕಲನ್ನು ಈ ಕೆಳಕಂಡವರ ಅವಗಾಹನೆಗಾಗಿ ಸಲ್ಲಿಸಲಾಗಿದೆ:

ಮಹಾವಿಲೇಖನಾಧಿಕಾರಿಗಳು,
ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ,
ಬೆಂಗಳೂರು – 560 001.

www.kpscvaani.com

ಅಧಿಸೂಚನೆಯ ನಕಲನ್ನು ಈ ಕೆಳಕಂಡವರಿಗೆ ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ ರವಾನಿಸಲಾಗಿದೆ:

1. ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಗ್ರಾಮಾಂತರ, ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ಬೀದರ್, ಬಿಜಾಪುರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಧಾರವಾಡ, ಗದಗ್, ಗುಲ್ಬರ್ಗ, ಹಾಸನ, ಹಾವೇರಿ, ಕೊಡಗು, ಕೋಲಾರ, ಕೊಪ್ಪಳ, ಮಂಗಳೂರು, ಮಂಡ್ಯ, ರಾಮನಗರ, ರಾಯಚೂರು, ತುಮಕೂರು, ಉಡುಪಿ, ಕಾರವಾರ, ಶಿವಮೊಗ್ಗ ಮತ್ತು ಯಾದಗಿರಿ.
2. ವಿಲೇಖನಾಧಿಕಾರಿಗಳು, ನಗರ ಸಿವಿಲ್ ನ್ಯಾಯಾಲಯ, ಬೆಂಗಳೂರು,
3. ನ್ಯಾಯಾಧೀಶರು, ಕುಟುಂಬ ನ್ಯಾಯಾಲಯ, ಮೈಸೂರು.
4. ಅಧ್ಯಕ್ಷಾಧಿಕಾರಿಗಳು, ಕಾರ್ಮಿಕ ನ್ಯಾಯಾಲಯ, ಮೈಸೂರು.
5. ಅಧ್ಯಕ್ಷಾಧಿಕಾರಿಗಳು, ಔದ್ಯಮಿಕ ನ್ಯಾಯಾಧಿಕರಣ, ಮೈಸೂರು.
6. 8ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಹುಣಸೂರು.
7. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು, ಮೈಸೂರು.
8. ನ್ಯಾಯಾಧೀಶರು, ಲಘುವ್ಯವಹಾರಗಳ ನ್ಯಾಯಾಲಯ, ಮೈಸೂರು.
9. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಂ.ದಂ.ನ್ಯಾಂ. ದಂಡಾಧಿಕಾರಿಗಳು, ನಂಜನಗೂಡು.
10. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಂ.ದಂ.ನ್ಯಾಂ. ದಂಡಾಧಿಕಾರಿಗಳು, ತಿ. ನರಸೀಪುರ.
11. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಂ.ದಂ.ನ್ಯಾಂ. ದಂಡಾಧಿಕಾರಿಗಳು, ಕೆ.ಆರ್.ನಗರ.
12. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಂ.ದಂ.ನ್ಯಾಂ. ದಂಡಾಧಿಕಾರಿಗಳು, ಹುಣಸೂರು.
13. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಂ.ದಂ.ನ್ಯಾಂ. ದಂಡಾಧಿಕಾರಿಗಳು, ಪಿರಿಯಾಪಟ್ಟಣ.
14. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಂ.ದಂ.ನ್ಯಾಂ. ದಂಡಾಧಿಕಾರಿಗಳು, ಹೆಚ್.ಡಿ.ಕೋಟೆ.
15. 1ನೇ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಂ.ದಂ.ನ್ಯಾಂ. ದಂಡಾಧಿಕಾರಿಗಳು, ಮೈಸೂರು.
16. 2ನೇ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಂ.ದಂ.ನ್ಯಾಂ. ದಂಡಾಧಿಕಾರಿಗಳು, ಮೈಸೂರು.
17. ಸಿವಿಲ್ ನ್ಯಾಯಾಧೀಶರು ಮತ್ತು ಪ್ರಂ.ದಂ.ನ್ಯಾಂ. ದಂಡಾಧಿಕಾರಿಗಳು, ನಂಜನಗೂಡು.

www.kpscvaani.com

18. ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ. ದಂಡಾಧಿಕಾರಿಗಳು, ತಿ.ನರಸೀಪುರ.

19. ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ. ದಂಡಾಧಿಕಾರಿಗಳು, ಕೆ.ಆರ್.ನಗರ.

20. ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ. ದಂಡಾಧಿಕಾರಿಗಳು, ಹುಣಸೂರು.

21. ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ. ದಂಡಾಧಿಕಾರಿಗಳು, ಪಿರಿಯಾಪಟ್ಟಣ.

22. ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ. ದಂಡಾಧಿಕಾರಿಗಳು, ಹೆಚ್.ಡಿ. ಕೋಟೆ.

23. ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, 2ನೇ ನ್ಯಾಯಾಲಯ, ಮೈಸೂರು.

24. ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, 3ನೇ ನ್ಯಾಯಾಲಯ, ಮೈಸೂರು.

25. ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, 4ನೇ ನ್ಯಾಯಾಲಯ, ಮೈಸೂರು.

ಇವರಿಗೆ,

1. ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು – ಇವರಿಗೆ ಕರ್ನಾಟಕ ರಾಜ್ಯ ವಾರ್ತಾ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ. (ದ್ವಿಪ್ರತಿಯಲ್ಲಿ)

2. ಆಯುಕ್ತರು, ವಾರ್ತಾ ಇಲಾಖೆ, ನಂ.17, ಭಗವಾನ್ ಮಹಾವೀರ (ಇನ್‌ಫೆಂಟ್ರಿ) ಜೈನ್ ರಸ್ತೆ, ಬೆಂಗಳೂರು – 560 001 – ಇವರಿಗೆ ಪ್ರಾದೇಶಿಕ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರಕ್ಕಾಗಿ ಪ್ರಕಟಿಸಲು ಕೋರಿ. (ದ್ವಿಪ್ರತಿಯಲ್ಲಿ)

3. ಉದ್ಯೋಗಾಧಿಕಾರಿಗಳು, ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಮೈಸೂರು ಇವರಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ

4. ರಾಜ್ಯ ಸರ್ಕಾರದ www.karnataka.gov.in ಜಾಲತಾಣಕ್ಕೆ ಪ್ರಕಟಣೆಗಾಗಿ.

5. ಸಾಫ್ಟ್‌ವೇರ್ ಟೆಕ್ನಿಷಿಯನ್, ಕಂಪ್ಯೂಟರ್ ವಿಭಾಗ, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು – ಇವರಿಗೆ Webhost ಮಾಡುವ ಸಲುವಾಗಿ.

www.kpscvaani.com